# ಎನ್‌ಐಟಿಕೆ ಸ್ಟ್ರಾಂಗ್‌ರೂಂನಲ್ಲಿ ಮತಯಂತ್ರ ಭದ್ರ



ಎನ್‌ಐಟಿಕೆಯಲ್ಲಿರುವ ಸ್ಟ್ರಾಂಗ್ ರೂಮ್ ಕಾವಲು ಕಾಯುತ್ತಿರುವ ಭದ್ರತಾ ಸಿಬ್ಬಂದಿ.

• **ಕನ್ನಡಪ್ರಭ ವಾರ್ತೆ** ಮಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೇ 13ರಂದು ಸುರತ್ಕಲ್ ಎನ್‌ಐಟಿಕೆಯಲ್ಲಿ ಮತಎಣಿಕೆ ಕಾರ್ಯ ನಡೆಯಲಿದೆ. ಈಗಾಗಲೇ ಎಲ್ಲ ಕ್ಷೇತ್ರಗಳಿಂದ ಇವಿಎಂ ಯಂತ್ರಗಳನ್ನು ತಂದು ಎನ್‌ಐಟಿಕೆಯ ಸ್ಟ್ರಾಂಗ್ ರೂಮ್‌ನಲ್ಲಿ ಬಿಗಿ ಭದ್ರತೆಯಲ್ಲಿ ಇರಿಸಲಾಗಿದೆ. ಬುಧವಾರ ತಡರಾತ್ರಿ ಇವಿಎಂ ಯಂತ್ರಗಳು ಎನ್‌ಐಟಿಕೆ ಸ್ಟ್ರಾಂಗ್ ರೂಮ್ ತಲುಪಿದ್ದು, ಇದನ್ನು ಕೇಂದ್ರ ಪ್ಯಾರಾ ಮಿಲಿಟರಿ ಪಡೆಯ ಸಿಬ್ಬಂದಿ ಕಾವಲು ಕಾಯುತ್ತಿದ್ದಾರೆ. ಇವಿಎಂ ಮೇಲಿನ ರಾಜಕೀಯಪಕ್ಷಗಳಸಂಶಯನಿವಾರಣೆಗಾಗಿ ಇದೇ ಮೊದಲ ಬಾರಿಗೆ ಪ್ರತಿ ಕ್ಷೇತ್ರದ ಡಿಮಸ್ಟರಿಂಗ್ ಕೇಂದ್ರದಿಂದ ಎನ್‌ಐಟಿಕೆ ಸುರತ್ಕಲ್‌ವರೆಗೆ ಇವಿಎಂ ಹೊತ್ತ ವಾಹನದ ಮೇಲೆ ನಿಗಾ ಇರಿಸಲು ಅವಕಾಶ ಮಾಡಿಕೊಡಲಾಗಿದೆ. ಅಲ್ಲದೆ, ಸ್ಟ್ರಾಂಗ್ ರೂಮ್ ಮೇಲೆ ನಿಗಾ ಇರಿಸಲು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಪ್ರತ್ಯೇಕ ಕೊಠಡಿ ಮಾಡಿಅಲ್ಲಿಸಿಸಿಕ್ಯಾಮರಾದೃಶ್ಯಾವಳಿಗಳನ್ನು ನೋಡಲು ಅವಕಾಶ ಮಾಡಲಾಗಿದೆ.

Kannada Prabha, Date: 12/05/23 p, no-03